ಸದನದಲ್ಲಿ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಕೋಲಾರ ನಗರ ಸಭೆ ವ್ಯಾಪ್ತಿಯ ರಸ್ತೆಗಳನ್ನು ದುರಸ್ಥಿಪಡಿಸಿ ಅಭಿವೃದ್ಧಿ ಪಡಿಸುವ ಬಗ್ಗೆ

ಶ್ರೀ ಗೋವಿಂದ ರಾಜು (ವಿಧಾನಸಭೆಯಿಂದ ಚುನಾಯಿತರಾದವರು) -

44 (254) ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಕೋಲಾರ ನಗರಸಭೆಯಲ್ಲಿರುವ ವಾರ್ಡ್‌ಗಳ ಸಂಖ್ಯೆ ಎಷ್ಟು ಮತ್ತು ಒಟ್ಟು ವಿಸ್ತೀರ್ಣವೆಷ್ಟು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಕೋಲಾರ ನಗರಸಭೆಯ ವ್ಯಾಪ್ತಿಯಲ್ಲಿ ಬರುವ ರಸ್ತೆಗಳು ಸಂಪೂರ್ಣ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ ರಸ್ತೆಗಳು ಸಂಪೂರ್ಣ ಹಾಳಾಗಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನ ಸವಾರರಿಗೆ ತುಂಬಾ ತೊಂದರೆಯಾಗಿರುವುದು ನಿಜವೇ ;

(ಈ) ಹಾಗಿದ್ದಲ್ಲಿ, ಈ ರಸ್ತೆಗಳನ್ನು ದುರಸ್ಥಿಪಡಿಸಿ ಅಭಿವೃದ್ಧಿಪಡಿಸಲು ಇದುವರೆವಿಗೂ ಸರ್ಕಾರ ಕ್ರಮಕೈಗೊಳ್ಳದಿರುವುದು ನಿಜವೇ ;

(ಉ) ಹಾಗಿದ್ದಲ್ಲಿ, ಈ ರಸ್ತೆಗಳ ಅಭಿವೃದ್ಧಿಪಡಿಸಲು ಕಾಮಗಾರಿಗಾಗಿ ಸರ್ಕಾರ ಅನುದಾನವನ್ನೇನಾದರೂ ನಿಗಧಿಪಡಿಸಿ ಬಿಡುಗಡೆ ಮಾಡಿದೆಯೇ ;

(ಊ) ಮಾಡಿದ್ದಲ್ಲಿ, ಯಾವ ಯಾವ ಲೆಕ್ಕಶೀರ್ಷಿಕೆಗಳಡಿ ಎಷ್ಟೆಷ್ಟು ಅನುದಾನವನ್ನು ಒದಗಿಸಲಾಗಿದೆ ; (ಸಂಪೂರ್ಣ ಮಾಹಿತಿ ನೀಡುವುದು)

(ಋ) ರಸ್ತೆ ದುರಸ್ಥಿ ಕಾಮಗಾರಿಗಳನ್ನು ಯಾವಾಗ ಕೈಗೆತ್ತಿಕೊಳ್ಳಲಾಗುವುದು ? (ಸಂಪೂರ್ಣ ವಿವರ ನೀಡುವುದು)